ಪ್ರವಾಸೋದ್ಯಮ ಕೇಂದ್ರ

594 ಶ್ರೀ ಪುಟ್ಟರಾಜು ಸಿ.ಎಸ್ : ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯ ಮೇಲುಕೋಟೆ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಮೈಸೂರು–ಶಿವಮೊಗ್ಗ ರಸ್ತೆಯಲ್ಲಿ ಬರುವ ಶ್ರವಣಬೆಳಗೋಳ, ಹಳೇಬೀಡು ಮತ್ತು ಬೇಲೂರಿಗೆ ಆಗಮಿಸುವ ಪ್ರವಾಸಿಗರ ಅನುಕೂಲಕ್ಕಾಗಿ ಕಣಿವೆ ಕೊಪ್ಪಲು ಪ್ರವಾಸೋದ್ಯಮ ಕೇಂದ್ರವನ್ನು ತೆರೆಯಲು ಉದ್ದೇಶಿಸಲಾಗಿದೆಯೇ;

ಆ) ಹಾಗಿದ್ದಲ್ಲಿ, ಈ ಕಾಮಗಾರಿಯ ಒಟ್ಟು ಅಂದಾಜು ವೆಚ್ಚವೆಷ್ಟು, ಇಲ್ಲಿಯವರೆವಿಗೂ ಬಿಡುಗಡೆ ಮಾಡಿರುವ ಹಣ ಎಷ್ಟು; ತ್ವರಿತವಾಗಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಜಿ.ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು) :

ಅ) ಈ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

638 ಶ್ರೀ ತನ್ವೀರ್ ಸೇಠ್ : ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ಗೃಹ ಮಂಡಳಿಯು ಕಳೆದ 3 ವರ್ಷಗಳಲ್ಲಿ ರಾಜ್ಯಾದ್ಯಾಂತ ತೆಗೆದು ಕೊಂಡಿರುವ ಹಾಗೂ ಪೂರ್ಣಗೊಳಿಸಿರುವ ಯೋಜನೆಗಳ ವಿವರಗಳನ್ನು ಒದಗಿಸುವುದು;

ಆ) ಕಳೆದ 3 ವರ್ಷಗಳಲ್ಲಿ ಸರ್ಕಾರವು ಗೃಹ ಮಂಡಳಿಗೆ ಒದಗಿಸಿರುವ ಅನುದಾನದ ವಿವರಗಳನ್ನು ಒದಗಿಸುವುದು.

ಇ) ರಾಜ್ಯದ ವಸತಿ ಹೀನರಿಗೆ ಮನೆ; ನಿವೇಶನಗಳನ್ನು ಒದಗಿಸಲು ಗೃಹ ಮಂಡಳಿಯು ಯಾವ ಕ್ರಮಗಳನ್ನು ತೆಗೆದುಕೊಂಡಿದೆ?